ಪಿ ಡಬ್ಲ್ಯೂ-1

<u>ಸಾಕ್ಷಿಯನ್ನು ದಿಃ 21.03.2024 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

**<u>ಪಾಟೀ ಸವಾಲು 2 ನೇ ಎದುರುದಾರರ ಪರ ವಕೀಲರಿಂದಃ</u>**

ನನ್ನ ಬೈಕ್ ನಾನೇ ಚಾಲನೆ ಮಾಡುತ್ತೇನೆ. ಆದರೆ ನನಗೆ ಬೈಕ್ ಚಾಲನಾ ಪರವಾನಿಗೆ ಇರುವುದಿಲ್ಲ. ಎರಡು ಬೈಕ್ ಗಳಿಗೆ ರಸ್ತೆ ಮಧ್ಯದಲ್ಲಿ ಅಪಘಾತವಾಗಿದೆ ಎಂದರೆ ಸಾಕ್ಷಿ ರಸ್ತೆ ಎಡಭಾಗದಲ್ಲಿ ಆಗಿದೆ ಎಂದು ಹೇಳುತ್ತಾರೆ. ಸದರಿ ಅಪಘಾತವು ನನಗೆ ಬೈಕ್ ಸರಿಯಾಗಿ ಚಾಲನೆ ಮಾಡಲು ಬಾರದ ಕಾರಣ ನನ್ನ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ಡಿ ಎಲ್ ಇಲ್ಲದೆ ಬೆಎಕ್ ಚಾಲನೆ ಮಾಡಬಾರದು ಎಂದು ನನಗೆ ಗೊತ್ತಿತ್ತು. ಅಪಘಾತವು ನನ್ನ ತಪ್ಪಿನಿಂದ ಆಗಿದ್ದರೂ ಸಹ ಎದುರಿಗಡೆಯಿಂದ ಬರುತ್ತಿದ್ದ ಬೈಕ್ ಚಾಲಕನ ತಪ್ಪಿನಿಂದ ಆಗಿದೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಅಪಘಾತ ಪಡಿಸಿದ ಬೈಕ್ ಚಾಲಕನಿಗೆ ಡಿ ಎಲ್ ಇಲ್ಲದ ಕಾರಣ ವಿಮೆ ಕಂಪನಿ ಯಾವುದೇ ಪರಿಹಾರ ಕೊಡಲು ಬಾಧ್ಯಸ್ಥನಲ್ಲ ಎಂದರೆ ಸರಿಯಲ್ಲ.

ನನಗೆ ಚಿತ್ರದುರ್ಗದ ಸರ್ಕಾರಿ ಆಸ್ಪತ್ರೆಯ ವೈದ್ಯರಾದ ಡಾ. ಶ್ರೀಧರ್ ನನ್ನ ಬಲಮುಂಗೈಗೆ ಶಸ್ತ್ರ ಚಿಕಿತ್ಸೆ ಮಾಡಿದ್ದಾರೆ. ನನ್ನ ಬಲಗಾಲಿನ ಮೂಳೆ ಮುರಿದಿದೆ. ನನ್ನ ಬಲಗಾಲಿಗೆ ಪಿ ಒ ಪಿ ಮಾಡಿರುತ್ತಾರೆ ಎಂದರೆ ಸರಿ. ಮೂಳೆ ಕೂಡಿದ ನಂತರ ಸದರಿ ಪಿ ಒ ಪಿ ತೆಗೆದಿದ್ದಾರೆ ಎಂದರೆ ನಿಜ. ನಾನು ಡಾ.ಶಿವಣ್ಣ ರೆಡ್ಡಿ ಜೊತೆ ಶರೀಕಾಗಿ ಸುಳ್ಳು ಅಂಗನ್ಯೂನ್ಯತೆ ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ನನ್ನ ಚಿಕಿತ್ಸೆಗೆ ರೂ.2 ಲಕ್ಷ ಖರ್ಚಾಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆಧ್ಯ ಆರ್ಥೋ ಕೇರ್ ನವರು ಕೊಟ್ಟಿರುವ ಎಲ್ಲಾ ಬಿಲ್ಸ್ ಗಳು ನಕಲಿ ಮತ್ತು ಪರಿಹಾರ ಪಡೆಯುವ ಉದ್ದೇಶದಿಂದ ಸೃಷ್ಟಿಸಿದ ದಾಖಲೆಗಳು ಎಂದರೆ ಸರಿಯಲ್ಲ. ನನ್ನ ಹೆಸರಿನಲ್ಲಿ ಯಾವುದೇ ಜಮೀನು ಇರುವುದಿಲ್ಲ. ನನಗೆ ವ್ಯವಸಾಯದಿಂದ ವಾರ್ಷಿಕ ರೂ.3 ಲಕ್ಷ ಆದಾಯವಿತ್ತು ಎಂದು ಸುಳ್ಳು

ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಪ್ರಮಾಣ ಪತ್ರದಲ್ಲಿ ಹೇಳಿರುವಂತೆ ಯಾವುದೇ ದೈಹಿಕ ನ್ಯೂನ್ಯತೆಗಳು ಇಲ್ಲ ಎಂದರೆ ಸರಿಯಲ್ಲ. ನನಗೆ ದೈಹಿಕ ತೊಂದರೆ ಇದೆ ಎಂದು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

ನನ್ನ ಉಕ್ತ ಲೇಖನದಂತೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ ಹಿರಿಯೂರು.